# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/ 20 /2022-23 ದಿನಾಂಕ: 10-05-2022

### 20ನೇ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ:19/01/2022, ಆದೇಶದಂತೆ ದಿನಾಂಕ;24/02/2022 ರಂದು ನೋಡಲ್ ಅಧಿಕಾರಿ ಶ್ರೀ.ಶಿವಲಿಂಗಪ್ಪ ಸಾಹುಕಾರ್ , ಸಹಾಯಕ ಕಾರ್ಯಪಾಲಕ ಅಭಿಯಂತರು(ಕೆರೆಗಳು) , ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಇವರ ಅಧ್ಯಕ್ಷತೆಯಲ್ಲಿ ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗದ ವಾರ್ಡ್-56 ಎ.ನಾರಾಯಣಪುರದಲ್ಲಿ ದಿನಾಂಕ:10-05-2022ರಂದು ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ನಡೆಸಿದ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | ಅಧಿಕಾರಿಗಳು | |
| 1 | ಶ್ರೀ.ಶಿವಲಿಂಗಪ್ಪ ಸಾಹುಕಾರ್ | ವಾರ್ಡ್ ಸಮಿತಿ ಸಭೆಯ ನೋಡಲ್ ಅಧಿಕಾರಿ ವಾ.ನಂ.56, ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿಬಿಎಂಪಿ |
| 2 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 3 | ಶ್ರೀ.ಸುವರ್ಣ ಹೆಚ್.ಸಿ | ಕಿರಿಯ ಆರೋಗ್ಯ ನಿರೀಕ್ಷಕರು |
| 4 | ಶ್ರೀಮತಿ.ಡಾ॥ ಅಂಜಲಿ | ಆರೋಗ್ಯ ಅಧಿಕಾರಿ ವಾರ್ಡ್ ನಂ 56 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 5 | ಶ್ರೀ.ಅಭಿಷೇಕ್.ಪಿ | ಕಿರಿಯ ಅಭಿಯಂತರರು ಬೆಸ್ಕಾಂ ವಾರ್ಡ್ ನಂ.56 ಎ.ನಾರಾಯಣಪುರ |
| 6 | ಶ್ರೀ.ರಾಘವೇಂದ್ರ | ಹಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ.ಮಹಮ್ಮದ್ ಮುದಾಸೀರ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯುಎಸ್.ಎಸ್.ಬಿ |
| 8 | ಶ್ರೀ.ಮದುರಾಜ್ | ವಾರ್ಡ್ ಮಾರ್ಷಲ್ |
| 9 | ಶ್ರೀಮತಿ.ಬೇಬಿ ಜಿ.ಆರ್ | ವಾರ್ಡ್ ಮಾರ್ಷಲ್ |
| 11 | ಶ್ರೀ. ಅಖಿಲ್ | ಡೇಟಾ ಎಂಟ್ರಿ ಆಪರೇಟರ್, ಕಂದಾಯ ಇಲಾಖೆ. |
| | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು | |
| 12 | ಶ್ರೀ.ಸುರೇಶ್ .ವಿ | ಎ-ನಾರಾಯಣಪುರ |
| 13 | ಶ್ರೀಮತಿ.ಮಂಗಳ | ಎ-ನಾರಾಯಣಪುರ |
| 14 | ಶ್ರೀ.ಸುನಿಲ್ | ಎ-ನಾರಾಯಣಪುರ |
| 15 | ಶ್ರೀ.ಸುಂದರ್ ಶ್ರೀನಿವಾಸನ್ | ಎ-ನಾರಾಯಣಪುರ |
| 16 | ಶ್ರೀಮತಿ ಸುಲೇಖ | ಎ-ನಾರಾಯಣಪುರ |
| 17 | ಶ್ರೀ.ರಾಮುಲು | ಎ-ನಾರಾಯಣಪುರ |
| 18 | ಶ್ರೀ. ಎಸ್. ನಾರಾಯಣ್ | ಎ-ನಾರಾಯಣಪುರ |

Scanned with CamScanner

| | | |
|---|---|---|
| 19 | ಶ್ರೀ. ಎ.ಗಣೇಶ್ | ಎ-ನಾರಾಯಣಪುರ |
| 20 | ಶ್ರೀ. ಶಂಕರ್ | ಎ-ನಾರಾಯಣಪುರ |

**ನಡಾವಳಿ 1.** ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಾಂಬಾವ್ಯ ನಾಲ್ಕನೇ ಅಲೆಯನ್ನು ನಿಯಂತ್ರಿಸುವಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಪಟ್ಟಂತೆ ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು 12 ರಿಂದ 14 ವರ್ಷದೊಳಗಿನ ಮಕ್ಕಳಿಗೆ ಒಂದನೇ ಮತ್ತು ಎರಡನೇ ಡೋಸ್ ಲಸಿಕೆಯನ್ನು ನೀಡುತ್ತಿರುವುದಾಗಿ ಹಾಗೂ 60 ವರ್ಷ ಮೇಲ್ಪಟ್ಟವರಿಗೆ 70% ಬೂಸ್ಟರ್ ಡೋಸ್ ನೀಡಿರುವುದಾಗಿ ತಿಳಿಸಿದರು. ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾರಿಗಳು

**ನಡಾವಳಿ 2.** ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳ ಸಂಬಂಧಿಸಿದ ವಿಷಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯ ಮಹರಾಜ ಸ್ಟ್ರೀಟ್‌ನಲ್ಲಿ ಮ್ಯಾನ್‌ಹೋಲ್ ಎತ್ತರವನ್ನು ತಗ್ಗಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದರು ಮತ್ತು ಶಕ್ತಿನಗರದಲ್ಲಿ ನೀರಿನ ಸಮಸ್ಯೆ ಇರುವುದಾಗಿ ತಿಳಿಸಿದರು ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಮಾತಾನಾಡಿ ಕಾವೇರಿ ನೀರಿನ ಪೈಪ್ ಲೈನ್ ಕಾಮಗಾರಿಯನ್ನು 15 ದಿನದೊಳಗೆ ಪ್ರಾರಂಭಿಸಿ ನೀರಿನ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು

**ನಡಾವಳಿ 3.** ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ .

ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ ಚರ್ಚಿಸಲಾಗಿದ್ದು, ಸೊಳ್ಳೆ ಮತ್ತು ನೊಣಗಳು ಹೆಚ್ಚಾಗಿರುವುದರಿಂದ ಔಷದಿ ಸಿಂಪಡನೆ ಮಾಡುವಂತೆ ಸಾರ್ವಜನಿಕರು ಒತ್ತಾಯಿಸಿದರು, ಅದರಂತೆ ಸಂಬಂಧಪಟ್ಟ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸೂಚಿಸಲಾಯಿತು.

ಕ್ರಮ: ಘನತ್ಯಾಜ್ಯ ನಿರ್ವಹಣ ವಿಭಾಗ

**ನಡಾವಳಿ 4.** ಕಂದಾಯ ಇಲಾಖೆಗೆ ಸಂಬಂದಿಸಿದ ವಿಷಯಗಳ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕಂದಾಯ ಶಾಖೆಯ ಅಧಿಕಾರಿಗಳಾದ ಕಂದಾಯ ಪರಿವೀಕ್ಷಕರು ಮತ್ತು ಕಂದಾಯ ವಸೂಲಿಗಾರರು ಕಛೇರಿಯಲ್ಲಿ ಇರುವುದಿಲ್ಲವೆಂದು ಸಾರ್ವಜನಿಕರು ದೂರು ನೀಡಿರುತ್ತಾರೆ ಅದರಂತೆ ಕಂದಾಯ ಶಾಖೆಯ ಅಧಿಕಾರಿಗಳಿಗೆ ನೋಟಿಸ್ ನೀಡುವಂತೆ ತಿರ್ಮಾನಿಸಲಾಯಿತು ಅದರಂತೆ ಸಂಬಂಧಪಟ್ಟ ವಾರ್ಡ್ ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಲಾಯಿತು.

ಕ್ರಮ: ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿ ಮತ್ತು ಕಂದಾಯ ಶಾಖೆ

Scanned with CamScanner

**ನಡಾವಳಿ 5.ಅಂಚೆ ಕಛೇರಿಯ ಪತ್ರ ವಿಲೇವಾರಿ ಮಾಡುವ ಬಗ್ಗೆ .**

ಈ ಕುರಿತು ಚರ್ಚಿಸಲಾಗಿ, ದಿನಾಂಕ: 28-04-2022 ರಂದು ಎ.ನಾರಾಯಣಪುರ ಅಂಚೆ ಕಛೇರಿಗೆ ಸರ್ಕಾರಿ ಕಟ್ಟಡದಲ್ಲಿ ಸ್ಥಳ ಮಂಜೂರು ಮಾಡುವಂತೆ ಕೋರಿ ಅಂಚೆ ಕಛೇರಿ ಮುಖ್ಯಸ್ಥರಿಂದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಚ್.ಎ.ಎಲ್ ಏರ್‌ಪೋರ್ಟ್ ಉಪ ವಿಭಾಗಕ್ಕೆ ಪತ್ರ ಬಂದಿರುತ್ತದೆ, ಅದರಂತೆ ವಾರ್ಡ್ ಸಮಿತಿ ಸಭೆಯಲ್ಲಿ ಪ್ರಸ್ತಾಪಿಸಿ ಎ.ನಾರಾಯಣಪುರ ವಾರ್ಡ್ ಕಛೇರಿಯಲ್ಲಿ ಒಂದು ಖಾಲಿ ಕೊಠಡಿ ಲಭ್ಯವಿದ್ದು ಸದರಿ ಕೊಠಡಿಯನ್ನು ಅಂಚೆ ಕಛೇರಿಗೆ ನೀಡಬಹುದೆಂದು ಸಾರ್ವಜನಿಕರು ಕೋರಿಕೆ ಮೇರೆಗೆ ಕಂದಾಯ ಶಾಖೆಯವರಿಗೆ ಮುಂದಿನ ಕ್ರಮ ತೆಗೆದುಕೊಳ್ಳಲು ಸೂಚಿಸಲಾಯಿತು .

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 56 ಮತ್ತು ಕಂದಾಯ ಶಾಖೆ

**ನಡಾವಳಿ 6.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ .**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು, ನೇತ್ರಾವತಿ ಮುಖ್ಯರಸ್ತೆಯ ಕಾಮಗಾರಿಯನ್ನು ಕೈಗೊಳ್ಳುವಂತೆ ಸಭೆಯಲ್ಲಿ ಚರ್ಚಿಸಲಾಯಿತು. ಈ ಬಗ್ಗೆ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 56

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.56 ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು
ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:-

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.

Scanned with CamScanner